# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **304 (276)** |
| **02. ಸದಸ್ಯರ ಹೆಸರು** | : | **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **03. ಉತ್ತರಿಸುವ ದಿನಾಂಕ** | : | **18.07.2024** |
| **04. ಉತ್ತರಿಸುವ ಸಚಿವರು** | : | **ಗೃಹ ಸಚಿವರು** |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಅಂತರ ಜಿಲ್ಲಾ ವರ್ಗಾವಣೆ ಹಾಗೂ ಪತಿ–ಪತ್ನಿ ಪ್ರಕರಣದಲ್ಲಿ ವರ್ಗಾವಣೆ ಕೋರಿ ಕಾನ್ಸ್‌ಟೇಬಲ್ ಮತ್ತು ಹೆಡ್ ಕಾನ್ಸ್‌ಟೇಬಲ್ ದರ್ಜೆಯ ಹುದ್ದೆಯಲ್ಲಿರುವವರಿಂದ ಇದುವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಒಟ್ಟು ಸಂಖ್ಯೆ ಎಷ್ಟು? | ಅಂತರ ಜಿಲ್ಲಾ ವರ್ಗಾವಣೆ ಹಾಗೂ ಪತಿ–ಪತ್ನಿ ಪ್ರಕರಣದಲ್ಲಿ ವರ್ಗಾವಣೆ ಕೋರಿ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಹೆಡ್ ಕಾನ್ಸ್‌ಟೇಬಲ್ ವೃಂದಗಳಲ್ಲಿ ಇದುವರೆಗೆ ಒಟ್ಟು 6898 ಅರ್ಜಿಗಳು ಸಲ್ಲಿಕೆಯಾಗಿರುತ್ತವೆ. |
| ಆ. | ಈ ಸಲ್ಲಿಕೆಯಾಗಿರುವ ಅರ್ಜಿಗಳಲ್ಲಿ ಅರ್ಹತೆ ಹೊಂದಿರುವ ಎಷ್ಟು ಜನ ಕಾನ್ಸ್‌ಟೇಬಲ್ ಮತ್ತು ಹೆಡ್ ಕಾನ್ಸ್‌ಟೇಬಲ್ ದರ್ಜೆಯ ಹುದ್ದೆಯಲ್ಲಿರುವವರಿಗೆ ಇದುವರೆಗೆ ವರ್ಗಾವಣೆ ಮಾಡಲಾಗಿದೆ? | ಸಲ್ಲಿಕೆಯಾಗಿರುವ ಅರ್ಜಿಗಳಲ್ಲಿ ಈವರೆಗೆ ಅರ್ಹತೆ ಹೊಂದಿರುವ ಪತಿ–ಪತ್ನಿ ಪ್ರಕರಣದ 81 ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹಾಗೂ 05 ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ರವರುಗಳಿಗೆ ಅಂತರ ಜಿಲ್ಲಾ ವರ್ಗಾವಣೆ ಮಾಡಲಾಗಿರುತ್ತದೆ. |
| ಇ. | ಈಗಾಗಲೇ ವರ್ಗಾವಣೆಗೆ ಅರ್ಜಿ ಸಲ್ಲಿಸಿ ಇನ್ನೂ ಬಾಕಿ ಉಳಿದಿರುವ ಅರ್ಜಿಗಳನ್ನು ಕೂಡಲೇ ಇತ್ಯರ್ಥಪಡಿಸುವ ಕುರಿತು ಸರ್ಕಾರದ ನಿಲುವೇನು? | ಇಲಾಖೆಯ ವರ್ಗಾವಣೆ ಪೋರ್ಟಲ್‌ನಲ್ಲಿ ಸ್ವೀಕೃತವಾಗಿರುವ ಅರ್ಜಿಗಳನ್ನು ಪರಿಶೀಲಿಸಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯ ಅಧಿಕಾರಿ/ ಸಿಬ್ಬಂದಿಗಳು ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ಭಾಗಕ್ಕೆ ವರ್ಗಾವಣೆ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಸದರಿ ಅರ್ಜಿಗಳನ್ನು ಒಂದೇ ಬಾರಿಗೆ ಪರಿಗಣಿಸಿದ್ದಲ್ಲಿ ಕೆಲವು ಘಟಕಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಿಕ್ತಸ್ಥಾನಗಳು ಉಂಟಾಗಿ ಇಲಾಖೆಯ ಕಾರ್ಯ ನಿರ್ವಹಣೆಗೆ ತೊಂದರೆಯುಂಟಾಗುತ್ತದೆ. ಈ ಹಿನ್ನೆಲೆಯಲ್ಲಿ ಇಲಾಖೆಯಲ್ಲಿ ಸ್ವೀಕೃತವಾಗಿರುವ ವರ್ಗಾವಣಾ ಅರ್ಜಿಗಳನ್ನು ರಿಕ್ತ ಹುದ್ದೆಯ ಆಧಾರದ ಮೇಲೆ ಇಲಾಖೆಯ ಆಡಳಿತ ನಿರ್ವಹಣೆ ಹಾಗೂ ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಗೆ ಯಾವುದೇ ಧಕ್ಕೆಯಾಗದ ರೀತಿಯಲ್ಲಿ ಪರಿಶೀಲಿಸಿ ಕ್ರಮಕೈಗೊಳ್ಳಲಾಗುತ್ತಿದೆ. |
| ಈ | ಅರ್ಹತೆ ಹೊಂದಿರುವವರ ಅರ್ಜಿಗಳನ್ನಾದರೂ ಕೂಡಲೇ ವರ್ಗಾವಣೆಗೆ ಪರಿಗಣಿಸಿ ಅವರ ಬಹುಕಾಲದ ಬೇಡಿಕೆಯನ್ನು ಆದಷ್ಟು ಶೀಘ್ರವಾಗಿ ಈಡೇರಿಸಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ? | |

**HD/144/PPS/2024**

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು